KKT - Copy

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 194 ಯುಆರ್‌ಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 30-5-2016

ಇಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು – 560 001.

ಇವರಿಗೆ
ಅಧ್ಯಕ್ಷರು,
ಶ್ರೀ ಕೆ.ಕೆ. ತುಂಗಳ ಮೆಮೋರಿಯಲ್ ಟ್ರಸ್ಟ್ (ರಿ),
ಕುಡುಚಿ ರಸ್ತೆ, ಜಂಖಂಡಿ-587 301,
ಬಾಗಲಕೋಟೆ ಜಿಲ್ಲೆ.

ಮಾನ್ಯರೆ,

ವಿಷಯ:- ತಮ್ಮ ಸಂಸ್ಥೆಯ ವತಿಯಿಂದ ಹೊಸದಾಗಿ ಜಮಖಂಡಿಯಲ್ಲಿ ತುಂಗಳ ಸ್ಕೂಲ್ ಆಫ್ ಬೇಸಿಕ್ ಅಂಡ್ ಅಪ್ಲೈಡ್ ಸೈನ್ಸಸ್‌ನ್ನು ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

1) ತಮ್ಮ ಸಂಸ್ಥೆಯು 2016-17ನೇ ಶೈಕ್ಷಣಿಕ ಸಾಲಿನಿಂದ ಸ್ಥಾಪಿಸಲು ಉದ್ದೇಶಿಸಿರುವ ಮೇಲ್ಕಂಡ ಕಾಲೇಜನ್ನು ಸಿಂಡಿಕೇಟ್/ಶೈಕ್ಷಣಿಕ ಮಂಡಳಿಯು ತಿಳಿಸಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಸಂಯೋಜಿಸಲು ಪ್ರಸ್ತಾಪಿಸಲಾಗಿದೆ. ಖಾಸಗಿ ಶಿಕ್ಷಣ ಸಂಸ್ಥೆಗಳು ಸ್ಥಾಪಿಸಲು ಇಚ್ಛಿಸುವ ಕಾಲೇಜು ಯಾವುದೇ ಕಾಲಕ್ಕೂ ಸರ್ಕಾರದ ಅನುದಾನ ಕೇಳುವುದಿಲ್ಲವೆಂಬ ಷರತ್ತಿನ ಮೇಲೆ ಅಂದರೆ ಶಾಶ್ವತ ಅನುದಾನ ರಹಿತ ಕಾಲೇಜುಗಳಾಗಿ ಮಂಜೂರು ಮಾಡಲು ಸರ್ಕಾರ ತೀರ್ಮಾನಿಸಿದೆ. ಈ ಸಂಬಂಧವಾಗಿ ಸಂಸ್ಥೆಗಳು ನೀಡಬೇಕಾಗಿರುವ ಮಧ್ಯಂತರ ಒಪ್ಪಂದ ಪತ್ರದ ಪ್ರತಿಯನ್ನು ಲಗತ್ತಿಸಿದೆ. ಇದಕ್ಕೆ 8 ದಿನಗಳೊಳಗೆ ಸಂಬಂಧಿಸಿದ ದಾಖಲೆಗಳೊಡನೆ ಸರ್ಕಾರದ ಮುಂದೆ ಸಹಿ ಮಾಡಬೇಕು. ಸದರಿ ದಿನಾಂಕದೊಳಗೆ ಮೇಲ್ಕಂಡ ಪತ್ರವನ್ನು ಹಾಜರುಪಡಿಸದಿದ್ದಲ್ಲಿ, ನಿಮಗೆ ಕಾಲೇಜನ್ನು ಸ್ಥಾಪಿಸಲು ಆಸಕ್ತಿಯಿಲ್ಲವೆಂದು ಭಾವಿಸಲಾಗುವುದು. ಸದರಿ ಒಪ್ಪಂದಕ್ಕೆ ಸಹಿ ಮಾಡಿದ ನಂತರ ನಿಮ್ಮ ಕಾಲೇಜಿಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ದ 59(11)ನೇ ಪ್ರಕರಣದಡಿ ಸಂಯೋಜನೆ ನೀಡಲು ಸಂಬಂಧಿಸಿದ ವಿಶ್ವವಿದ್ಯಾನಿಲಯಕ್ಕೆ ಸೂಕ್ತ ಶಿಫಾರಸ್ಸು ಮಾಡಲಾಗುವುದು.

2) ಮೇಲ್ಕಂಡ ಮಧ್ಯಂತರ ಒಪ್ಪಂದವನ್ನು ರೂ.200-00 (ಎರಡು ನೂರು ಮಾತ್ರ) ಗಳ ಮೌಲ್ಯದ ನಾನ್-ಜುಡಿಷಿಯಲ್ ಸ್ಟಾಂಪ್ ಪೇಪರಿನಲ್ಲಿ ಮೂರು ಪ್ರತಿಗಳಲ್ಲಿ (ಒಂದು ಪ್ರತಿ ಸ್ಟಾಂಪ್ ಪೇಪರಿನಲ್ಲಿ ಮತ್ತೆರಡು ಅದರ ಛಾಯಾ ಪ್ರತಿಗಳು) ಸರ್ಕಾರಕ್ಕೆ ಸಲ್ಲಿಸಬೇಕು. ಸದರಿ ಒಪ್ಪಂದ ಪತ್ರಕ್ಕೆ (ಪ್ರತಿಗಳನ್ನೊಳಗೊಂಡು) ಇಬ್ಬರು ಸಾಕ್ಷಿಗಳ ಸಹಿ ಮೊದಲೇ ಹಾಕಿಸಿರಬೇಕು.

3) ಮಧ್ಯಂತರ ಒಪ್ಪಂದಕ್ಕೆ ಸಹಿ ಮಾಡಲು ಕಳುಹಿಸುವ ವ್ಯಕ್ತಿಗೆ ಅಧಿಕಾರ ನೀಡಿರುವುದನ್ನು ದೃಢೀಕರಿಸುವ ಆಡಳಿತ ಮಂಡಲಿಯ ಠರಾವು ನಿರ್ಣಯದ ಪ್ರತಿ ಲಗತ್ತಿಸಿರಬೇಕು. ಅದಕ್ಕೆ ಹಾಜರಿದ್ದ ಸದಸ್ಯರೆಲ್ಲರ ಸಹಿ ಇರಬೇಕು (ಮಧ್ಯಂತರ ಒಪ್ಪಂದದ 5ನೇ ಷರತ್ತನ್ನು ನೋಡಿ). ಅಂತೆಯೇ ಸದರಿ ವ್ಯಕ್ತಿಯ ಸಹಿಯನ್ನು ದೃಢೀಕರಿಸಿ ಸಂಸ್ಥೆಯ ಸೀಲು (ಮೊಹರು) ಗುರುತಿನ ಚೀಟಿ (Identity Card) ಗಳೊಂದಿಗೆ ಕಳುಹಿಸಲು ಕೋರಲಾಗಿದೆ.

ತಮ್ಮ ನಂಬುಗೆಯ,

(ಕೆ.ಎಲ್. ಸುಬ್ರಮಣ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-2)

30/5/16

**ಕರ್ನಾಟಕ ಸರ್ಕಾರ**

ಕ್ರಮಾಂಕ: ಇಡಿ 194 ಯುಆರ್‌ಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 31-5-2016

ಇಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.

ಮಾನ್ಯರೆ,

ವಿಷಯ:- 2016-17ನೇ ಶೈಕ್ಷಣಿಕ ಸಾಲಿನಿಂದ ತುಂಗಳ ಸ್ಕೂಲ್ ಆಫ್ ಬೇಸಿಕ್ ಅಂಡ್ ಅಪ್ಲೈಡ್ ಸೈನ್ಸಸ್, ಕುಡುಚಿ ರಸ್ತೆ, ಜಮಖಂಡಿ ತಾ॥, ಬಾಗಲಕೋಟೆ ಜಿಲ್ಲೆ - ಗೆ ಹೊಸ ಸಂಯೋಜನೆ ನೀಡುವ ಕುರಿತು.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ:ರಾಚವಿ/ಬೆಳಗಾವಿ/ಸಿಡಿಸಿ ವಿಭಾಗ/2015-16/15654/9, ದಿ: 30-3-2016.

-

2016-17ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಕೆ.ಕೆ. ತುಂಗಳ ಮೆಮೋರಿಯಲ್ ಟ್ರಸ್ಟ್ (ರಿ), ಕುಡುಚಿ ರಸ್ತೆ, ಜಮಖಂಡಿ ತಾ॥, ಬಾಗಲಕೋಟೆ ಜಿಲ್ಲೆ - ವತಿಯಿಂದ ತುಂಗಳ ಸ್ಕೂಲ್ ಆಫ್ ಬೇಸಿಕ್ ಅಂಡ್ ಅಪ್ಲೈಡ್ ಸೈನ್ಸಸ್‌ನ್ನು ಕುಡುಚಿ ರಸ್ತೆ, ಜಮಖಂಡಿ ತಾ॥, ಬಾಗಲಕೋಟೆ ಜಿಲ್ಲೆ, ಇಲ್ಲಿ ಬಿ.ಎಸ್ಸಿ. ಕೋರ್ಸುಗಳೊಂದಿಗೆ ಪ್ರಾರಂಭಿಸಲು ಸಂಯೋಜನೆ ಕೋರಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **2016-17ನೇ ಶೈಕ್ಷಣಿಕ ಸಾಲಿನಿಂದ ಶ್ರೀ ಕೆ.ಕೆ. ತುಂಗಳ ಮೆಮೋರಿಯಲ್ ಟ್ರಸ್ಟ್ (ರಿ), ಕುಡುಚಿ ರಸ್ತೆ, ಜಮಖಂಡಿ ತಾ॥, ಬಾಗಲಕೋಟೆ ಜಿಲ್ಲೆ - ವತಿಯಿಂದ ತುಂಗಳ ಸ್ಕೂಲ್ ಆಫ್ ಬೇಸಿಕ್ ಅಂಡ್ ಅಪ್ಲೈಡ್ ಸೈನ್ಸಸ್‌ನ್ನು ಕುಡುಚಿ ರಸ್ತೆ, ಜಮಖಂಡಿ ತಾ॥, ಬಾಗಲಕೋಟೆ ಜಿಲ್ಲೆ, ಇಲ್ಲಿ ಈ ಕೆಳಕಂಡ ಕೋರ್ಸುಗಳೊಂದಿಗೆ ಪ್ರಾರಂಭಿಸಲು** ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕೋರ್ಸು | ಮೂಲ ವಿಷಯ | ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| ಬಿ.ಎಸ್ಸಿ. | ಇಂಗ್ಲೀಷ್, ಕನ್ನಡ, ಹಿಂದಿ, | ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಗಣಕ ವಿಜ್ಞಾನ, ಸಂಖ್ಯಾಶಾಸ್ತ್ರ, ಇಲೆಕ್ಟ್ರಾನಿಕ್ಸ್. | 60 (ಅರವತ್ತು) |

**ಷರತ್ತುಗಳು:-**

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾತಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7) ದಿನಾಂಕ: 13-8-1997 ರಂದು ವಿಶಾಖ V/S ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಕೆ.ಎಲ್.ಸುಬ್ರಮಣ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-2)
31/5/16

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ.
3. ಅಧ್ಯಕ್ಷರು, ಶ್ರೀ ಕೆ.ಕೆ. ತುಂಗಳ ಮೆಮೋರಿಯಲ್ ಟ್ರಸ್ಟ್ (ರಿ), ಕುಡುಚಿ ರಸ್ತೆ, ಜಮಖಂಡಿ ತಾ॥, ಬಾಗಲಕೋಟೆ ಜಿಲ್ಲೆ.

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 181 ಯುಆರ್‌ಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-9-2019

ಇಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ,

ಕುಲಸಚಿವರು,
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ಬೆಳಗಾವಿ.

ಮಾನ್ಯರೆ,

ವಿಷಯ :- ತುಂಗಳ ಸ್ಕೂಲ ಆಫ್ ಬೇಸಿಕ್ ಆಂಡ್ ಅಪ್ಲೈಡ್ ಸೈನ್ಸಸ್ ಕುಡಚಿ ರಸ್ತೆ, ಜಮಖಂಡಿ ಅಂಚೆ /ತಾ/, ಬಾಗಲಕೋಟೆ ಜಿಲ್ಲೆ ಇಲ್ಲಿ ಹೊಸ ಐಚ್ಚಿಕ ವಿಷಯ ಪ್ರಾರಂಭಿಸಲು ಸಂಯೋಜನೆ ನೀಡುವ ಕುರಿತು.

ಉಲ್ಲೇಖ :- ತಮ್ಮ ಪತ್ರ ಸಂಖ್ಯೆ: ರಾಚವಿ/ಬೆಳಗಾವಿ/ಕುಸಕಾ/2018-19/5901/5, ದಿನಾಂಕ:22-03-2019.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಂಗಳ ಸ್ಕೂಲ ಆಫ್ ಬೇಸಿಕ್ ಆಂಡ್ ಅಪ್ಲೈಡ್ ಸೈನ್ಸಸ್ ಕುಡಚಿ ರಸ್ತೆ, ಜಮಖಂಡಿ ಅಂಚೆ /ತಾ/, ಬಾಗಲಕೋಟೆ ಜಿಲ್ಲೆ- ಇಲ್ಲಿ ಹೊಸದಾಗಿ ಐಚ್ಚಿಕ ವಿಷಯಗಳನ್ನು ಪ್ರಾರಂಭಿಸಲು ಸಂಯೋಜನೆ ಕೋರಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ದ 59 ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, 2019-20ನೇ ಶೈಕ್ಷಣಿಕ ಸಾಲಿನಿಂದ ತುಂಗಳ ಸ್ಕೂಲ ಆಫ್ ಬೇಸಿಕ್ ಆಂಡ್ ಅಪ್ಲೈಡ್ ಸೈನ್ಸಸ್ ಕುಡಚಿ ರಸ್ತೆ, ಜಮಖಂಡಿ ಅಂಚೆ /ತಾ/, ಬಾಗಲಕೋಟೆ ಜಿಲ್ಲೆ ಇಲ್ಲಿ ಈ ಕೆಳಕಂಡಂತೆ ಹೊಸ ಐಚ್ಚಿಕ ವಿಷಯಗಳನ್ನು ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕೋರ್ಸು | ಮೂಲ ವಿಷಯ ಮತ್ತು ಪ್ರವೇಶ ಮಿತಿ | ಐಚ್ಚಿಕ ವಿಷಯ ಮತ್ತು ಪ್ರವೇಶ ಮಿತಿ | |
|---|---|---|---|
| ಬಿ.ಎಸ್ಸಿ | - | ರಸಾಯನಶಾಸ್ತ್ರ-ಸಸ್ಯಶಾಸ್ತ್ರ-ಪ್ರಾಣಿಶಾಸ್ತ್ರ | 30 (ಮೂವತ್ತು) |

**ಷರತ್ತುಗಳು:-**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸ್‌ಎಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

2...

5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

Mahesh R

(ಆರ್.ಮಹೇಶ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು -2)

18/9/19

ಪ್ರತಿ:-

1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560001.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ
3) ಪ್ರಾಂಶುಪಾಲರು, ತುಂಗಳ ಸ್ಕೂಲ ಆಫ್ ಬೇಸಿಕ್ ಆಂಡ್ ಅಪ್ಲೈಡ್ ಸೈನ್ಸಸ್ ಕುಡಚಿ ರಸ್ತೆ, ಜಮಖಂಡಿ ಅಂಚೆ /ತಾ/, ಬಾಗಲಕೋಟೆ ಜಿಲ್ಲೆ.

*****